ಕರ್ನಾಟಕ ಸರ್ಕಾರ
# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012. ದೂರವಾಣಿ: 080–23460460 (5 ಲೈನ್ಸ್), ಫ್ಯಾಕ್ಸ್: 080–23461576 ಇ-ಮೇಲ್: keauthority-ka@nic.in ವೆಬ್‌ಸೈಟ್: http://kea.nic.in

**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.03/2022** **ದಿನಾಂಕ: 19-09-2022**

## ಪಿಜಿಇಟಿ–2022 – ಕರ್ನಾಟಕದಲ್ಲಿನ ಸ್ನಾತಕೋತ್ತರ ವೈದ್ಯಕೀಯ / ದಂತವೈದ್ಯಕೀಯ (ಪದವಿ ಮತ್ತು ಡಿಪ್ಲೊಮ) ಕೋರ್ಸುಗಳ ಪ್ರವೇಶ 2022–23 ಮತ್ತು ಕರ್ನಾಟಕದ ಸೇವಾನಿರತ ವೈದ್ಯರುಗಳಿಗೆ ಸ್ನಾತಕೋತ್ತರ ಡಿಎನ್‌ಬಿ ಹಾಗೂ ಡಿಪ್ಲೊಮ ಕೋರ್ಸುಗಳಿಗೆ ಪ್ರವೇಶ

1) ನಿರ್ದೇಶಕರು ವೈದ್ಯಕೀಯ ಶಿಕ್ಷಣ ಇವರ ದಿನಾಂಕ: 07–09–2022 ರ ಪತ್ರ DME/PGS/10/2022-23 ಉಲ್ಲೇಖದೊಂದಿಗೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು NEET-PG 2022 / NEET MDS 2022 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗೂ ಅರ್ಹತಾ ಮಾನದಂಡಗಳನ್ನು ಪೂರೈಸುವ ಅರ್ಹ ಅಭ್ಯರ್ಥಿಗಳಿಂದ 2022–23ನೇ ಸಾಲಿಗೆ ಕರ್ನಾಟಕ ರಾಜ್ಯದಲ್ಲಿನ ಸ್ನಾತಕೋತ್ತರ ಪದವಿ / ಡಿಪ್ಲೊಮ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಅಂದರೆ ಸರ್ಕಾರಿ ವೈದ್ಯಕೀಯ / ದಂತವೈದ್ಯಕೀಯ ಕಾಲೇಜುಗಳ ಸೀಟುಗಳು, ಖಾಸಗಿ ಮತ್ತು ಅಲ್ಪ ಸಂಖ್ಯಾತ ವೈದ್ಯಕೀಯ / ದಂತವೈದ್ಯಕೀಯ ಕಾಲೇಜುಗಳಲ್ಲಿ ಲಭ್ಯವಾಗುವ ಸರ್ಕಾರಿ ಕೋಟದ ಸೀಟುಗಳು ಮತ್ತು ಖಾಸಗಿ ಮತ್ತು ಅಲ್ಪ ಸಂಖ್ಯಾತ ವೈದ್ಯಕೀಯ / ದಂತವೈದ್ಯಕೀಯ ಕಾಲೇಜುಗಳಲ್ಲಿ ಖಾಸಗಿ ಸೀಟುಗಳ (KPCF, KRLMPCA, AMPCK and Private Universities) ಪ್ರವೇಶಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ.

2) ಸರ್ಕಾರದ ಆದೇಶ ಸಂಖ್ಯೆ ಆಕುಕ 882 ಹೆಚ್.ಎಸ್.ಹೆಚ್. 2021 ಬೆಂಗಳೂರು ದಿನಾಂಕ: 10–01–2022 ರ ಅನ್ವಯ NEET-PG 2022 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗೂ ಅರ್ಹತಾ ಮಾನದಂಡಗಳನ್ನು ಪೂರೈಸುವ ಕರ್ನಾಟಕ ಸೇವಾನಿರತ ಅರ್ಹ ಅಭ್ಯರ್ಥಿಗಳಿಂದ 2022–23ನೇ ಸಾಲಿಗೆ ಕರ್ನಾಟಕ ರಾಜ್ಯದಲ್ಲಿನ ಸ್ನಾತಕೋತ್ತರ ಡಿಎನ್‌ಬಿ ಹಾಗೂ ಡಿಪ್ಲೊಮ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿಯೂ ಸಹ ಪ್ರಾಧಿಕಾರವು ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಿದೆ.

3) NEET-PG 2022 / NEET MDS 2022 ರಲ್ಲಿ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳು ಮಾತ್ರ ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ನೊಂದಣಿ ಮಾಡಿಕೊಳ್ಳಲು ಅರ್ಹರಿರುತ್ತಾರೆ.

4) ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ NEET-PG 2022 / NEET MDS 2022 ರಲ್ಲಿ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50th Percentile) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗೂ ಪ್ರವೇಶಕ್ಕಾಗಿ ನೊಂದಣಿಯನ್ನು ಮಾಡಿಕೊಳ್ಳಬಹುದಾಗಿದೆ. SC / ST / OBC ಅರ್ಹತಾ ಮಾನದಂಡಗಳು ಕರ್ನಾಟಕ SC / ST / OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

5) ಪಿಜಿಇಟಿ–2022ಕ್ಕೆ ಆನ್‌ಲೈನ್ ಮೂಲಕ ನೊಂದಣಿ ಹಾಗೂ ಅರ್ಜಿ ಸಲ್ಲಿಸಲು ಪೋರ್ಟಲ್ ಅನ್ನು ದಿನಾಂಕ: **19–09–2022 ರಿಂದ** ತೆರೆಯಲಾಗಿದ್ದು, ಆಸಕ್ತ ಅರ್ಹ ಅಭ್ಯರ್ಥಿಗಳು ದಿನಾಂಕ: **23–09–2022 ರ ಸಂಜೆ 4.00 ರೊಳಗಾಗಿ** ಆನ್‌ಲೈನ್ ಮೂಲಕ ನೊಂದಣಿ ಮಾಡಿ ಶುಲ್ಕವನ್ನು ಪಾವತಿಸಿ, ದಿನಾಂಕ: **23–09–2022 ರ ರಾತ್ರಿ 11.59 ರ ವರೆಗೆ** ಅರ್ಜಿ ಸಲ್ಲಿಸಬಹುದಾಗಿರುತ್ತದೆ.

6) ನೊಂದಣಿ ಶುಲ್ಕ, ದಾಖಲಾತಿ ಪರಿಶೀಲನೆಯ ವೇಳಾಪಟ್ಟಿ, ದಾಖಲಾತಿ ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲಾತಿಗಳು, ಹಾಗೂ ಇತರೆ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿಕೊಂಡು ನೊಂದಣಿ ಮಾಡಿ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿ ಪರಿಶೀಲನೆಗೆ ಹಾಜರಾಗಬಹುದು.

7) ವಿವರವಾದ ಅರ್ಹತಾ ಮಾನದಂಡಗಳನ್ನೊಳಗೊಂಡ ಮಾಹಿತಿ ಪುಸ್ತಕ 2022 ಅನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಲಾಗಿರುತ್ತದೆ.

8) NEET-PG 2022 / NEET MDS 2022 ನಲ್ಲಿ ಅರ್ಹತೆಯನ್ನು ಪಡೆದ ಮಾತ್ರಕ್ಕೆ, ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ / ನಿಗದಿತ ಪ್ರಮಾಣ ಪತ್ರಗಳನ್ನು ದಾಖಲಾತಿ ಪರಿಶೀಲನೆಗೆ ಹಾಜರು ಪಡಿಸದಿದ್ದಲ್ಲಿ ಅಭ್ಯರ್ಥಿಯು ಪ್ರವೇಶಾತಿಗಾಗಿ ಯಾವುದೇ ಹಕ್ಕನ್ನು ಹೊಂದುವುದಿಲ್ಲ. ಮುಂದುವರಿದು, ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಯಶಸ್ವಿಯಾಗಿ ಪೂರೈಸುವ ಅಭ್ಯರ್ಥಿಗಳು ಮಾತ್ರ ಕರ್ನಾಟಕದಲ್ಲಿನ ಸರ್ಕಾರಿ / ಖಾಸಗಿ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ.

9) ನೊಂದಣಿ ಮಾಡದಿರುವ ಅಥವಾ ನೊಂದಣಿ ಮಾಡಿ ದಾಖಲಾತಿಗಳನ್ನು ಪರಿಶೀಲಿಸಿಕೊಳ್ಳದೆ ಇರುವ ಅಭ್ಯರ್ಥಿಗಳು ಪ್ರಾಧಿಕಾರದಿಂದಾಗಲೀ ಅಥವಾ ಕಾಲೇಜುಗಳಿಂದಾಗಲೀ ಸ್ನಾತಕೋತ್ತರ ವೈದ್ಯಕೀಯ / ದಂತ ವೈದ್ಯಕೀಯ ಸೀಟುಗಳನ್ನು ತೆಗೆದುಕೊಳ್ಳಲು ಅನುಮತಿಸಲಾಗುವುದಿಲ್ಲ, MOP-UP ಸುತ್ತಿನ ಸೀಟು ಹಂಚಿಕೆಯ ನಂತರ ಉಳಿಯಬಹುದಾದ ಸೀಟುಗಳನ್ನು ಆಯಾ ಕಾಲೇಜುಗಳಿಗೆ ವರ್ಗಾಯಿಸಲಾಗುತ್ತದೆ. ಈ ಸೀಟುಗಳನ್ನು ಭರ್ತಿ ಮಾಡಿಕೊಳ್ಳಲು, ಪ್ರಾಧಿಕಾರವು ಕಳುಹಿಸುವ ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಮಾಡಿಸಿ Verification Slip ಹೊಂದಿರುವ, ಆದರೆ ಯಾವುದೇ ಸೀಟುಗಳನ್ನು ಹಂಚಿಕೆ ಪಡೆಯದೇ ಇರುವ ಅಭ್ಯರ್ಥಿಗಳ ಪಟ್ಟಿಯ ಅನುಕ್ರಮದಂತೆ ಕಾಲೇಜುಗಳಲ್ಲಿ ಸ್ನಾತಕೋತ್ತರ ವೈದ್ಯಕೀಯ / ದಂತ ವೈದ್ಯಕೀಯ ಸೀಟುಗಳನ್ನು ಭರ್ತಿಮಾಡಿಕೊಳ್ಳಲಾಗುತ್ತದೆ. (ಭಾರತ ಸರ್ಕಾರದ ಸೂಚನೆಗಳ ಅನ್ವಯ)

**ಸೂಚನೆ:** NEET-PG 2022 / NEET MDS 2022 ರಲ್ಲಿ ಅರ್ಹತೆ ಪಡೆದ ಎಲ್ಲಾ ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ಪಿಜಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ (ಪದವಿ / ಡಿಪ್ಲೊಮಾ) ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗಲು ಆನ್‌ಲೈನ್ ಮೂಲಕ ನೊಂದಾಯಿಸಿಕೊಳ್ಳಲು ಮತ್ತು ದಾಖಲೆಗಳ ಪರಿಶೀಲನಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದೆ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್: **http://kea.kar.nic.in** ಅನ್ನು ನೋಡಲು ಕೋರಿದೆ.

ಸಹಿ/–
(ಎಸ್. ರಮ್ಯ, ಭಾ.ಆ.ಸೇ)
ಕಾರ್ಯನಿರ್ವಾಹಕ ನಿರ್ದೇಶಕರು

ವಾಸಾಸಂಇ/ವಾ.ಪ್ರ/2294/2022–23

Scanned with CamScanner